**Crl. Mis.** 223/2023. **PW** 1

ದಿನಾಂಕಃ 05.03.2024 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆ ಅರ್ಜಿದಾರರ ಪರ ವಕೀಲರಿಂದ ಃ

ಈ ದಿನ ನಾನು ನನ್ನ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳ ಬಗ್ಗೆ ಮಾಹಿತಿ ಇರುತ್ತದೆ. ಪ್ರಮಾಣ ಪತ್ರವನ್ನು ನಾನೇ ಹೇಳಿ ಬರೆಸಿದ್ದು ಅದನ್ನು ನಾನು ಓದಿ ತಿಳಿದುಕೊಂಡ ನಂತರ ಅದಕ್ಕೆ ಸಹಿ ಮಾಡಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳ ಬಗ್ಗೆ ಮಾಹಿತಿ ಇರುತ್ತದೆ. ನಾನು ಈ ಕೆಳಕಂಡ ದಾಖಲೆಗಳನ್ನು ಹಾಜರು ಮಾಡಿದ್ದೇನೆ.

ನನ್ನ ಆಧಾರ್ ಕಾರ್ಡ್ ನ ನೋಟರೈಸ್ಡ್ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ.1 ಎಂದು ಗುರುತಿಸಲಾಯಿತು. ಮತದಾರರ ಚೀಟಿಯ ನೋಟರೈಸ್ಡ್ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ.2 ಎಂದು ಗುರುತಿಸಲಾಯಿತು. ನನ್ನ ಮಗನ ಜನನ ಪ್ರಮಾಣ ಪತ್ರದ ನೋಟರೈಸ್ಡ್ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ.3 ಎಂದು ಗುರುತಿಸಲಾಯಿತು. ಆದಾರ್ ಕಾರ್ಡ್ ನ ನೋಟರೈಸ್ಡ್ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ.4 ಎಂದು ಗುರುತಿಸಲಾಯಿತು. ವಿವಾಹ ಆಮಂತ್ರಣ ಪತ್ರಿಕೆಯನ್ನು ನೋಟರೈಸ್ಡ್ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ.5 ಎಂದು ಗುರುತಿಸಲಾಯಿತು. ಶಾಲಾ ವ್ಯಾಸಾಂಗ ದೃಢೀಕರಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ 06 ಎಂದು ಗುರುತಿಸಲಾಯಿತು. ನಾಲ್ಕು ಕ್ಯಾಶ್ ಬಿಲ್ ಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ಒಟ್ಟಾಗಿ ನಿಪಿ 7 ಎಂದು ಗುರುತಿಸಲಾಯಿತು.

ಆದ್ದರಿಂದ ನಾನು ನನ್ನ ಅರ್ಜಿಯಲ್ಲಿ ಕೇಳಿರುವಂತೆ ಆದೇಶ ಮಾಡಬೇಕೆಂದು ಕೋರಿಕೊಳ್ಳುತ್ತೇನೆ.

ಪಾಟೀ ಸವಾಲು ಎದುರುದಾರರ ಪರ ವಕೀಲರಿಂದ ಃ ಕಾಲಾವಕಾಶ ಕೋರಿದ್ದು, ಕಾಲಾವಕಾಶ ನೀಡಲಾಯಿತು.

ತೆ ನ್ಯಾ ಬೆ ಮಾಡಲಾಯಿತು. ಓ ಹೇ ಕೇ ಸರಿಯಿದೆ.

ಪ್ರ. ದ. ನ್ಯಾ. ದಂಡಾಧಿಕಾರಿಗಳು,
ತೀರ್ಥಹಳ್ಳಿ